# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಮಂಗಳವಾರ, ೧೪, ಫೆಬ್ರವರಿ, ೨೦೨೩(**ಮಾಘ**, ೨೫, ಶಕವರ್ಷ, ೧೯೪೪)<br>BENGALURU, TUESDAY, 14, FEBRUARY, 2023(MAGHA , 25, SHAKAVARSHA, 1944) | ನಂ. ೬೯<br>No. 69 |
|---|---|---|


## 7ನೇ ರಾಜ್ಯ ವೇತನ ಆಯೋಗ

ಸಂಖ್ಯೆ: ರಾವೇಆ/1/ಆಡಳಿತ/2023

7ನೇ ರಾಜ್ಯ ವೇತನ ಆಯೋಗ,
ಔಷಧ ನಿಯಂತ್ರಣ ಇಲಾಖೆಯ
ಹಳೆಯ ಕಟ್ಟಡ, ಬೆಂಗಳೂರು,
ದಿನಾಂಕ: 14.02.2023.

## ಅಧಿಕೃತ ಜ್ಞಾಪನ

**ವಿಷಯ:** 7ನೇ ರಾಜ್ಯ ವೇತನ ಆಯೋಗವು ಹೊರಡಿಸಿರುವ ಪ್ರಶ್ನಾವಳಿಗಳಿಗೆ ಉತ್ತರಿಸಲು ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ.

*****

ರಾಜ್ಯ ಸರ್ಕಾರವು ಸರ್ಕಾರಿ ನೌಕರರು, ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರು, ಸ್ಥಳೀಯ ಸಂಸ್ಥೆಗಳ ನೌಕರರು ಹಾಗೂ ವಿಶ್ವವಿದ್ಯಾಲಯಗಳ ಬೋಧಕೇತರ ಸಿಬ್ಬಂದಿಗಳ ವೇತನ, ತುಟ್ಟಿಭತ್ಯೆ ಹಾಗೂ ಇತರೆ ಸೌಲಭ್ಯಗಳ ಬಗ್ಗೆ ಪರಿಶೀಲಿಸಿ, ಪರಿಷ್ಕರಿಸಿ ಸರ್ಕಾರಕ್ಕೆ ವರದಿ ನೀಡಲು ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್‌ಆರ್‌ಪಿ 2022 ದಿನಾಂಕ: 19.11.2022 ರಲ್ಲಿ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿದೆ.

ಆಯೋಗಕ್ಕೆ ವಹಿಸಲಾಗಿರುವ ಪರಿಶೀಲನಾಂಶಗಳ ಕುರಿತು ಸಾರ್ವಜನಿಕರು, ಸೇವಾ ಸಂಘಗಳು ಸರ್ಕಾರಿ ನೌಕರರು ಹಾಗೂ ಸಂಘ ಸಂಸ್ಥೆಗಳಿಂದ ಮುಕ್ತ ಸಲಹೆ, ಅನಿಸಿಕೆ ಅಲ್ಲದೇ ಇಲಾಖೆಗಳಿಂದ ಮಾಹಿತಿ ಹಾಗೂ ಮುಕ್ತ ಸಲಹೆ ಪಡೆಯುವ ಉದ್ದೇಶವನ್ನು ಗಮನದಲ್ಲಿಟ್ಟುಕೊಂಡು ಆಯೋಗವು ದಿನಾಂಕ: 17.01.2023ರ ಅಧಿಕೃತ ಜ್ಞಾಪನದಲ್ಲಿ ವಿವಿಧ ಪ್ರಶ್ನಾವಳಿಗಳನ್ನು ರಚಿಸಿದ್ದು, ಸಂಬಂಧಪಟ್ಟ ಪ್ರಶ್ನಾವಳಿಗಳಿಗೆ ಸರ್ಕಾರದ ಅಮುಕಾ/ಪ್ರಕಾ/ಕಾರ್ಯದರ್ಶಿಗಳು, ಇಲಾಖಾ ಮುಖ್ಯಸ್ಥರು, ವಿಶ್ವವಿದ್ಯಾನಿಲಯಗಳು, ಅನುದಾನಿತ ಶಿಕ್ಷಣ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳು, ಸರ್ಕಾರಿ ನೌಕರರು, ನಿವೃತ್ತ ವೇತನದಾರರು ಹಾಗೂ ಆಸಕ್ತ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



ಸಾರ್ವಜನಿಕರು ಉತ್ತರಗಳನ್ನು ತಮ್ಮ ಅನಿಸಿಕೆ ಹಾಗೂ ಮುಕ್ತ ಸಲಹೆಗಳನ್ನು ದಿನಾಂಕ: 10.02.2023 ರೊಳಗೆ ಸಲ್ಲಿಸುವಂತೆ ಕೋರಲಾಗಿತ್ತು.

ಆಯೋಗವು ಹೊರಡಿಸಿದ ಪ್ರಶ್ನಾವಳಿಗಳಿಗೆ ಸಂಬಂಧಿಸಿದ ಎಲ್ಲ ವರ್ಗಗಳಿಂದ ಪ್ರತಿಕ್ರಿಯೆ ಹಾಗೂ ಉತ್ತರಗಳು ಸ್ವೀಕೃತವಾಗಿರುವುದಿಲ್ಲ. ಅಲ್ಲದೇ ಇಲಾಖೆಗಳು ಹಾಗೂ ಸಂಘಸಂಸ್ಥೆಗಳಿಂದ ಉತ್ತರ ಹಾಗೂ ಸಲಹೆಗಳನ್ನು ಸಲ್ಲಿಸಲು ಹೆಚ್ಚುವರಿ ಕಾಲಾವಕಾಶವನ್ನು ಕೋರಿರುವುದನ್ನು ಆಯೋಗವು ಗಮನಿಸಿದ್ದು, ಕಾಲಾವಕಾಶವನ್ನು ವಿಸ್ತರಿಸುವುದು ಅಗತ್ಯವೆಂದು ಆಯೋಗವು ಮನಗಂಡಿದೆ.

ಆದುದರಿಂದ ಸರ್ಕಾರದ ಅಮುಕಾ/ಪ್ರಕಾ//ಕಾರ್ಯದರ್ಶಿಗಳು, ಇಲಾಖಾ ಮುಖ್ಯಸ್ಥರು, ಸಂಘ ಸಂಸ್ಥೆಗಳು ಹಾಗೂ ಇತರರಿಂದ ವಿವಿಧ ಪ್ರಶ್ನಾವಳಿಗಳಿಗೆ ಉತ್ತರಿಸಲು ಈ ಹಿಂದೆ ನಿಗದಿಪಡಿಸಿದ ಕಾಲಾವಧಿಯನ್ನು ದಿನಾಂಕ: 28.02.2023 ವರೆಗೆ ಆಯೋಗವು ವಿಸ್ತರಿಸಿದೆ.

ಈ ವಿಸ್ತರಿತ ಅವಧಿಯೊಳಗೆ ಉತ್ತರ ಹಾಗೂ ಅನಿಸಿಕೆಗಳನ್ನು ಆಯೋಗಕ್ಕೆ ಸಲ್ಲಿಸುವಂತೆ ಕೋರಿದೆ.

**ಹೆಪ್ಸಿಬಾ ರಾಣಿ ಕೊರ್ಲಪಾಟಿ**
ಕಾರ್ಯದರ್ಶಿ,
7ನೇ ರಾಜ್ಯ ವೇತನ ಆಯೋಗ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE